ದಕ್ಷಿಣದವರಿಗೆ ಅನ್ಯಾಯವಾದಾಗ ಪದ್ಮಭೂಷಣ ಪ್ರಶಸ್ತಿ ನಿರಾಕರಿಸಿದ್ದ ಎಸ್.ಜಾನಕಿ: ಸ.ಗಿರಿಜಾಶಂಕರ

ರಂಗಣ್ಣನವರ ಕಲ್ಯಾಣ ಮಂಟಪದಲ್ಲಿ ಗಾನ ಕೋಗಿಲೆ ಎಸ್.ಜಾನಕಿ ಅವರ ಸ್ವರನಮನ ಸಮಾರಂಭ | ಎಸ್.ಜಾನಕಿ ಅವರ ಗಾಯನಕ್ಕೆ ಭಾಷೆ ಎಂದೂ ತೊಡಕಾಗಲಿಲ್ಲ: ಶಾಸಕ ತಮ್ಮಯ

• **ಕನ್ನಡಪ್ರಭ ವಾರ್ತೆ** ಚಿಕ್ಕಮಗಳೂರು

ದಕ್ಷಿಣ ಭಾರತೀಯರಿಗೆ ಅನ್ಯಾಯವಾಗುತ್ತಿದೆ ಎಂಬ ಕಾರಣಕ್ಕೆ ಕೇಂದ್ರ ಸರ್ಕಾರದ ಪದ್ಮಭೂಷಣ ಪ್ರಶಸ್ತಿಯನ್ನು ಗಾಯಕಿ ಎಸ್. ಜಾನಕಿ ತಿರಸ್ಕರಿಸಿದ್ದರು ಎಂದು ಹಿರಿಯ ಪತ್ರಕರ್ತ ಸ.ಗಿರಿಜಾಶಂಕರ ಹೇಳಿದರು.

ನಗರದ ಶ್ರೀ ರಂಗಣ್ಣನವರ ಕಲ್ಯಾಣ ಮಂಟಪದಲ್ಲಿಬ್ರಾಹ್ಮಣಮಹಾಸಭಾ, ಪೂರ್ವಿ ಸುಗಮಸಂಗೀತಅಕಾಡೆಮಿಟ್ರಸ್ಟ್,ಸಾಂಸ್ಕೃತಿಕ ಸಂಘ, ಲಯನ್ಸ್ ಸಂಸ್ಥೆ, ಚಿಕ್ಕಮಗಳೂರು ಪಟ್ಟಣಸಹಕಾರಬ್ಯಾಂಕ್ ಹಾಗೂ ಯುರೇಕಾ ಅಕಾಡೆಮಿ ಸಹಯೋಗದಲ್ಲಿ ಆಯೋಜಿಸಿದ್ದ ಗಾನಕೋಗಿಲೆಎಸ್.ಜಾನಕಿಅವರಸ್ವರನಮನ ಸಮಾರಂಭದಲ್ಲಿಮಾತನಾಡಿದೇಶದಅತ್ಯಂತ ಪ್ರಸಿದ್ಧ ಹಿನ್ನೆಲೆಗಾಯಕಿಯಾಗಿದ್ದರು. ಸಂಗೀತ ದಿಗ್ಗಜರೆಲ್ಲ್ಲಾ ಅವರ ಗಾಯನ ವಿದ್ಯುತ್ ಸಂಚಾರ ಮೂಡಿಸುತ್ತಿತ್ತು. ಇಂತಹ ಗಾಯಕಿ ನಮ್ಮಿಂದ ಭೌತಿಕವಾಗಿ ದೂರವಾದಾಗ ಆ ಕ್ಷೇತ್ರದಲ್ಲಿ ಶೂನ್ಯ ಆವರಿಸುತ್ತದೆ ಎಂದರು.

ಯಾವುದೇ ಪ್ರಶಸ್ತಿಗೂ ಆಸೆಪಡದ ಅವರ ಸಾಧನೆ ಗುರುತಿಸಿ ಪ್ರಶಸ್ತಿಗಳು ಅರಸಿ ಬಂದಾಗ ಆ ಪ್ರಶಸ್ತಿಗಳ ಹಿರಿಮೆಯೇ ಹೆಚ್ಚಾದವು. ತಮ್ಮ ಸ್ವಾಭಿಮಾನಕ್ಕೆ ಧಕ್ಕೆ ಬಂದಾಗ ಅಥವಾ ಸಂಗೀತ ಕ್ಷೇತ್ರ ನಿರ್ಲಕ್ಷಿಸಿದಾಗ ದಕ್ಷಿಣ ಭಾರತದವರಿಗೆ ಅನ್ಯಾಯವಾಗುತ್ತಿದೆ ಎಂಬ ಕಾರಣಕ್ಕೆ ಜಾನಕಿ ಅವರು ಅತ್ಯುನ್ನತ ಪದ್ಮಭೂಷಣ ಪ್ರಶಸ್ತಿಯನ್ನೇ 2013 ರಲ್ಲಿ ತಿರಸ್ಕರಿಸಿದ್ದನ್ನು ಸ್ಮರಿಸಿದರು.

ಶಾಸಕ ಎಚ್.ಡಿ.ತಮ್ಮಯ್ಯ ಮಾತನಾಡಿ ಖ್ಯಾತ ಹಿನ್ನೆಲೆಗಾಯಕಿ ಎಸ್.ಜಾನಕಿ ಅವರ ಗಾಯನಕ್ಕೆ ಭಾಷೆ ಎಂದೂ ತೊಡಕಾಗಲಿಲ್ಲ. 20ಕ್ಕೂ ಹೆಚ್ಚು ಭಾಷೆಗಳಲ್ಲಿ 84 ಸಾವಿರಕ್ಕೂ ಹೆಚ್ಚು ಹಾಡುಗಳನ್ನು ಅವರ ಕಂಠಸಿರಿ ನಮಗೆ ನೀಡಿದೆ. ಬಹುಶಃ ಇದೊಂದು ದಾಖಲೆ ಎನ್ನಬಹುದು. ಗಾಯನದಲ್ಲಿ ಭಾಷೆಯ ಒಳಸುಳಿಗಳನ್ನು ಅರ್ಥ ಮಾಡಿಕೊಂಡೇ ಹಾಡಿ ಜನಮೆಚ್ಚುಗೆ ಗಳಿಸಿದವರು. ಅವರನ್ನು ಒಂದು ಭಾಷೆ ಅಥವಾ ಒಂದು ರಾಜ್ಯಕ್ಕೆ ಸೀಮಿತಗೊಳಿಸುವ ಹಾಗಿಲ್ಲ ಎಂದರು.

ಜಾನಕಿಯವರು ಹಾಡಿದ ಗೀತೆಗಳನ್ನು ಪೂರ್ವಿ ತಂಡದ ಮುಖ್ಯಸ್ಥ ಎಂ.ಎಸ್. ಸುಧೀರ್, ಚೇತನ್‌ರಾಮ್, ಶ್ರೀಕಾಂತ್, ಪೂಜ್ಯ ಎಂ., ಕವಿತಾ ನಿಯತ್, ಅನುಷ, ಮೇಘ, ಅರ್ಪಿತಾ, ಪೃಥ್ವಿಶ್ರೀ ಗೀತೆಗಳನ್ನು ಅತ್ಯಂತ ಸುಶ್ರಾವ್ಯವಾಗಿ ಪ್ರಸ್ತುತಪಡಿಸಿದರು.

ನಾಳೆ ಕುರ್ಕಿಯ ಶಿರಡಿ ಶ್ರೀ ಸಾಯಿ ಮಂದಿರದಲ್ಲಿ ಗುರುಪೂರ್ಣಿಮೆ

ದಾವಣಗೆರೆ: ಶಿರಡಿ ಶ್ರೀ ಸಾಯಿ ಸೇವಾ ಚಾರಿಟಬಲ್ ಟ್ರಸ್ಟ್ ವತಿಯಿಂದ ತಾಲೂಕಿನ ಕುರ್ಕಿ ಬಳಿಯ ಬಾಡ-ಸಂತೆಬೆನ್ನೂರು ರಸ್ತೆಯ ಸೃಷ್ಟಿ ಶ್ರೀ ಸಾಯಿ ಚಂದನವನದ ಸಾಯಿ ಮಂದಿರದಲ್ಲಿ ಜುಲೈ 29ರಂದು ಗುರುಪೂರ್ಣಿಮೆಯ ಪ್ರಯುಕ್ತ ವಿವಿಧ ಧಾರ್ಮಿಕ ಪೂಜಾ ಕೈಂಕರ್ಯಗಳು ಹಾಗೂ ಉಚಿತ ರಕ್ತದಾನ ಶಿಬಿರ ಆಯೋಜಿಸಲಾಗಿದೆ. ಬೆಳಗ್ಗೆ 4:30ರ ಬ್ರಾಹ್ಮೀ ಮುಹೂರ್ತ ದಲ್ಲಿ ಗಣಹೋಮ, ಗುರು ಹೋಮ ಹಾಗೂ ಶ್ರೀ ಸಾಯಿಬಾಬಾರವರಿಗೆ ಕಾಕಡಾರತಿ ಮತ್ತು ಪಂಚಾಮೃತ ಅಭಿಷೇಕ, ಬೆಳಗ್ಗೆ 9 ರಿಂದ ಶ್ರೀ ಸಾಯಿ ಸತ್ಯನಾರಾಯಣ ಪೂಜೆ ಹಾಗೂ ನವಗ್ರಹ ಪೂಜೆ ಜರುಗಲಿದೆ. ಮಧ್ಯಾಹ್ನ 12 ರಿಂದ ಮಹಾ ಮಂಗಳಾರತಿ ನಂತರ ಮಹಾಪ್ರಸಾದ ವಿನಿಯೋಗ ಏರ್ಪಡಿಸಲಾಗಿದೆ. ಸಂಜೆ 6 ರಿಂದ ಧೂಪಾರತಿ, ಸಾಯಿಬಾಬಾ ಉತ್ಸವ ಮೂರ್ತಿ ಗರ್ಭಗುಡಿ ಸುತ್ತ ಪಲ್ಲಕ್ಕಿಯಲ್ಲಿ ಮೆರವಣಿಗೆ ನಡೆಯಲಿದೆ. ಸಂಜೆ 7 ರಿಂದ ಟ್ರಸ್ಟ್ ಸದಸ್ಯ ವೈ. ಯುವರಾಜ್ ಅವರ ತಂಡದಿಂದ ಭಜನೆ ಹಾಗೂ ರಾತ್ರಿ 8.30 ರಿಂದ ಶೇಜಾರತಿ ಜರುಗಲಿದೆ. ಗುರುಪೂರ್ಣಿಮೆಯ ಪ್ರಯುಕ್ತ ಪಿ.ಪ್ರಶಾಂತ್ ಅತ್ತಿಗೆರೆ ಅವರ ಬಸವೇಶ್ವರ ರಕ್ತ ಭಂಡಾರದ ವತಿಯಿಂದ ಉಚಿತ ರಕ್ತದಾನ ಶಿಬಿರ ಆಯೋಜಿಸಲಾಗಿದೆ. ರಕ್ತದಾನಿಗಳು ಭಾಗವಹಿಸಲು ಕೋರಲಾಗಿದೆ.

ಯುವ ಕಾಂಗ್ರೆಸ್ ಇಂದು ರಕ್ತದಾನ

ನರಸಿಂಹರಾಜಪುರ: ಶೃಂಗೇರಿ ವಿಧಾನ ಸಭಾಕ್ಷೇತ್ರದಶಾಸಕಟಿ.ಡಿ.ರಾಜೇಗೌಡರ ಹುಟ್ಟುಹಬ್ಬದ ಪ್ರಯುಕ್ತ ಬಾಳೆ ಹೊನ್ನೂರು ಬ್ಲಾಕ್ ಯುವ ಕಾಂಗ್ರೆಸ್ ನಿಂದ ಜು. 28 ರ ಮಂಗಳವಾರ ಬೆಳಗ್ಗೆ 10 ಗಂಟೆಯಿಂದ ಪಟ್ಟಣದ ಕಾಂಗ್ರೆಸ್ ಪಕ್ಷದ ಕಚೇರಿ ಆವರಣದಲ್ಲಿ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಬಾಳೆಹೊನ್ನೂರು ಬ್ಲಾಕ್ ಯುವ ಕಾಂಗ್ರೆಸ್ ಅಧ್ಯಕ್ಷ ರತನ್‌ಗೌಡ ಅರಗಿ ತಿಳಿಸಿದ್ದಾರೆ. ಪತ್ರಿಕಾ ಹೇಳಿಕೆ ನೀಡಿ, ರಕ್ತದಾನ ಮಾಡಿ ಒಂದು ಜೀವ ಉಳಿಸಬೇಕು. ರಕ್ತದಾನ ಮಹಾದಾನ. ಸಜ್ಜನಿಕೆಯ ರಾಜಕಾರಣಿ ಟಿ.ಡಿ.ರಾಜೇಗೌಡರ ಹುಟ್ಟುಹಬ್ಬದ ನಿಮಿತ್ತ ಎಲ್ಲಾ ರಕ್ತದಾನಿಗಳು ಹಾಗೂ ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು, ರಾಜೇ ಗೌಡರ ಅಭಿಮಾನಿಗಳು ಹೆಚ್ಚಿನ ಸಂಖ್ಯೆ ಯಲ್ಲಿ ಆಗಮಿಸಿ ರಕ್ತದಾನ ಮಾಡಲು ಮನವಿ ಮಾಡಿದ್ದಾರೆ.

ವಿಪ್ರ ಸ್ವ-ಉದ್ಯಮ ನೇರ ಸಾಲ ಯೋಜನೆಗೆ ಅರ್ಜಿ

ಶಿವಮೊಗ್ಗ: ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ವತಿಯಿಂದ 2026-27ನೇ ಸಾಲಿನ ವಿಪ್ರ ಸ್ವ ಉದ್ಯಮ ನೇರಸಾಲಯೋಜನೆಯಡಿಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರು ಸ್ವಯಂ ಉದ್ಯೋಗ ಕೈಗೊಳ್ಳಲು ನೇರವಾಗಿ ಸಾಲ ಮತ್ತು ಸಹಾಯಧನ ಮಂಜೂರು ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಹಸುಸಾಕಾಣಿಕೆ, ಗುಡಿ ಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೆಲ್ ಉದ್ಯಮ, ಟ್ಯಾಕ್ಸಿ ಮುಂತಾದ ವ್ಯವಹಾರ ವಹಿವಾಟುಗಳನ್ನು ಪ್ರಾರಂಭಿಸಲು ಕನಿಷ್ಠ 1 ಲಕ್ಷ ರು. ಗರಿಷ್ಠ 2 ಲಕ್ಷ ರು.ವರೆಗೆ ಆರ್ಥಿಕ ನೆರವು ಒದಗಿಸಲಾಗುತ್ತದೆ. ಈ ಪೈಕಿ ಶೇ. 20ರಷ್ಟು ಸಹಾಯಧನ ಸಿಗಲಿದ್ದು, ಉಳಿಕೆ ಮೊತ್ತ 80,000 ರು. ವರೆಗೆ ಶೇ. 4ರಷ್ಟು ವಾರ್ಷಿಕ ಬಡ್ಡಿ ದರದಲ್ಲಿ ಸಾಲ ಸೌಲಭ್ಯ ದೊರೆಯಲಿದೆ. ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ಆರ್ಥಿಕವಾಗಿ ಹಿಂದುಳಿದ ವರ್ಗದ ಪ್ರಮಾಣ ಪತ್ರವನ್ನು ಹೊಂದಿರಬೇಕು. ಕರ್ನಾಟಕ ರಾಜ್ಯದ ಕಾಯಂ ನಿವಾಸಿಯಾಗಿರಬೇಕು. 18 ರಿಂದ 65 ವರ್ಷದೊಳಗಿರಬೇಕು. ಮಹಿಳೆಯರಿಗೆ ಶೇ. 33 ಹಾಗೂ ದಿವ್ಯಾಂಗದವರಿಗೆ ಶೇ. 5 ರಷ್ಟು ಮೀಸಲಾತಿ ಇರಲಿದೆಗದು, ಆಧಾರ್‌ಸಂಖ್ಯೆಗೆ ಮೊಬೈಲ್ ಸಂಖ್ಯೆ ಹಾಗೂ ಬ್ಯಾಂಕ್ ಖಾತೆ ಸೀಡ್ ಆಗಿರಬೇಕು. ಅರ್ಹ ಆಸಕ್ತರು ದಿ: 31-08-2026ರ ಸಂಜೆ 5.30 ರೊಳಗಾಗಿ ಮಂಡಳಿಯ ಅಧಿಕೃತ ವೆಬ್‌ಸೈಟ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ವಿವರಗಳಿಗೆ ಸಹಾಯವಾಣಿ 8029605888, 8762249230, 08182 255294 ಹಾಗೂ ಮಂಡಳಿಯ ಫೇಸ್ ಬುಕ್ ಹಾಗೂ ಇನ್‌ಸ್ಟಾಗ್ರಾಂ ಪುಟಗಳನ್ನು ವೀಕ್ಷಿಸಬಹುದು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ತಿಳಿಸಿದ್ದಾರೆ.

MANAPPURAM FINANCE LTD.

ಹರಾಜು ಪ್ರಕಟಣೆ

CIN : L65910KL1992PLC006623
Registered Office : W - 4/638A, Manappuram House,
P.O. Valapad, Thrissur - 680 567, Kerala, India.

ಈ ಕೆಳಗಿನ ಶಾಖೆಗಳಲ್ಲಿ ಉಲ್ಲೇಖಿಸಿರುವ ಚಿನ್ನಾಭರಣಗಳ ಸಾರ್ವಜನಿಕ ಹರಾಜನ್ನು 17/08/2026 ರಂದು ಬೆಳಿಗ್ಗೆ 10.00 ಗಂಟೆಯಿಂದ ಈ ಕೆಳಗಿನ ಶಾಖೆಗಳಲ್ಲಿ ನಡೆಸಲು ಉದ್ದೇಶಿಸಲಾಗಿದೆ ಎಂದು ಈ ಮೂಲಕ ವಿಶೇಷವಾಗಿ ಸಾಲಗಾರರಿಗೆ ಮತ್ತು ಸಾರ್ವಜನಿಕರಿಗೆ ತಿಳಿಸಲಾಗಿದೆ. ನೋಟೀಸಿನ ಮೂಲಕ ತಿಳಿಸಲಾಗಿದ್ದರೂ ಸಾಲದ ಮೊತ್ತವನ್ನು ಪಾವತಿಸಲು ವಿಫಲರಾದ ಸುಸ್ತಿದಾರ ಗ್ರಾಹಕರ ಚಿನ್ನದ ಆಭರಣಗಳನ್ನು ಹರಾಜು ಮಾಡಲಾಗುತ್ತದೆ. [illegible]

ಅಡವುಗಳ ಪಟ್ಟಿ :

[illegible]

ಮೇಲಿನ ಹರಾಜಿನಲ್ಲಿ ಭಾಗವಹಿಸಲು ಬಯಸುವ ವ್ಯಕ್ತಿಗಳು ಈ ಮುಂದೆ ತಿಳಿಸಿರುವುದನ್ನು ಅನುಸರಿಸತಕ್ಕದ್ದು:- ಆಸಕ್ತಿಯುಳ್ಳ ಸವಾಲು ಕೂಗುವವರು (ಬಿಡ್ಡರ್ ಗಳು) ಎನ್‌ಇಎಫ್‌ಟಿ/ಆರ್‌ಟಿಜಿಎಸ್ ವಿಧಾನದ ಮೂಲಕ ರೂ. 10,000/ ಅನ್ನು ಇಎಂಡಿ (ವಿಫಲಗೊಂಡ ಸವಾಲು ಕೂಗುವವರಿಗೆ ಮರುಪಾವತಿಸಲಾಗುವಂಥದ್ದು) ಆಗಿ ಹರಾಜಿನ ದಿನದಂದು ಸಲ್ಲಿಸಬೇಕು. ಸವಾಲು ಕೂಗುವವರು ಮಾನ್ಯವಾದ ಐಡಿ ಕಾರ್ಡ್/ಪ್ಯಾನ್ ಕಾರ್ಡ್ ಇಟ್ಟುಕೊಂಡಿರಬೇಕು. ಹೆಚ್ಚಿನ ವಿವರಗಳಿಗಾಗಿ ದಯವಿಟ್ಟು 9072627147 ಅನ್ನು ಸಂಪರ್ಕಿಸಿ.

ಅಧಿಕೃತ ಅಧಿಕಾರಿ.
ಮಣಪ್ಪುರಂ ಫೈನಾನ್ಸ್ ಲಿ. ಪರವಾಗಿ